ಶ್ರೀರಂಗ ಏತ ನೀರಾವರಿ ಯೋಜನೆ

873 (795); ಶ್ರೀ ಹೆಚ್.ಸಿ. ಬಾಲಕೃಷ್ಣ

ಅ) ಮಾಗಡಿ ತಾಲ್ಲೂಕಿಗೆ ಕುಡಿಯುವ ನೀರನ್ನು ಒದಗಿಸುವ ಶ್ರೀರಂಗ ಏತ ನೀರಾವರಿ ಯೋಜನೆಯು ಯಾವ ಹಂತದಲ್ಲಿದೆ;

ಆ) ಶ್ರೀರಂಗ ಏತ ನೀರಾವರಿ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು?

ಶ್ರೀ ಎಂ.ಬಿ. ಪಾಟೀಲ್ (ಮಾನ್ಯ ಜಲ ಸಂಪನ್ಮೂಲ ಸಚಿವರು)

ಅ) ಹೇಮಾವತಿ ಯೋಜನೆ ಅಡಿಯಲ್ಲಿ ಶ್ರೀರಂಗ ಏತ ನೀರಾವರಿ ಯೋಜನೆಯ ಕಾಮಗಾರಿಗೆ ಸರ್ಕಾರದ ಆದೇಶ ಸಂಖ್ಯೆ: ಜಸಂಇ 45 ಎನ್‌ಹೆಚ್‌ಪಿ 2013, ದಿನಾಂಕ: 28.02.2014 ರಲ್ಲಿ ₹ 277.50 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಸದರಿ ಯೋಜನಾ ಕಾಮಗಾರಿಯ ಟೆಂಡರ್‌ನ ತಾಂತ್ರಿಕ ಬಿಡ್‌ಗಳ ಮೌಲ್ಯಮಾಪನ ಮಾಡಲಾಗುತ್ತಿದೆ.

ಆ) ಟೆಂಡರ್ ಅನುಮೋದನೆಯಾದ ನಂತರ ಯೋಜನೆಯನ್ನು ಪ್ರಾರಂಭಿಸಲಾಗುವುದು.

ಇ) ಸದರಿ ಕಾಮಗಾರಿಯನ್ನು 24 ತಿಂಗಳ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಯೋಜಿಸಲಾಗಿದೆ.